ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಅಲ್ಪಸಂಖ್ಯಾತರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

619 (729) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಮೂಲಭೂತ ಸೌಲಭ್ಯಗಳಿಲ್ಲದೆ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಲ್ಪಸಂಖ್ಯಾತರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಾಸನ ಜಿಲ್ಲೆಗೆ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು; ಇದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಯಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು; ಬಾಕಿ ಉಳಿಯಲು ಕಾರಣಗಳೇನು; ಯಾವಾಗ ಬಿಡುಗಡೆ ಮಾಡಲಾಗುವುದು; (ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳ ಮೊತ್ತವೆಷ್ಟು; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ಯಾರು ? (ಕಾಮಗಾರಿ ಹೆಸರು, ಗ್ರಾಮ ಮತ್ತು ತಾಲ್ಲೂಕಿನ ವಿವರ ನೀಡುವುದು)